ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

7

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಮಂಡಲ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 26/6/2020

# ಶಾಸಕರ ಭವನಕ್ಕೆ ದ್ರಾವಣ ಸಿಂಪಡಣೆಗೆ ಸೂಚನೆ

ಉ.ವಾ 26/6/20

ಬೆಂಗಳೂರು: ಶಾಸಕರ ಭವನದಲ್ಲಿ ಕೊರೊನಾ ಸೋಂಕಿತ ಪ್ರಕರಣಗಳು ಪತ್ತೆಯಾಗಿರುವುದರಿಂದ ತಕ್ಷಣ ದ್ರಾವಣ ಸಿಂಪಡಣೆ ಮಾಡಲು ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿದೆ. ವಿಧಾನ ಪರಿಷತ್ ಸಭಾಪತಿ, ವಿಧಾನಸಭಾಧ್ಯಕ್ಷರ ನೇತೃತ್ವದಲ್ಲಿ ನಡೆದ ಸಭೆಯಲ್ಲಿ ಶಾಸಕರ ಭವನದ ಮುಖ್ಯ ದ್ವಾರದಲ್ಲಿ ಶಾಸಕರ ಭವನಕ್ಕೆ ಪ್ರವೇಶಿಸುವವರು ತಮ್ಮ ಹೆಸರು, ಮೊಬೈಲ್ ನಂಬರ್, ಭೇಟಿಯ ಉದ್ದೇಶವನ್ನು ದಾಖಲಿಸಿ ಕಡ್ಡಾಯವಾಗಿ ವೈದ್ಯಕೀಯ ತಪಾಸಣೆಗೆ ಸಹಕರಿಸುವಂತೆ ಸೂಚಿಸಲಾಗಿದೆ.

ಶಾಸಕರ ಭವನಕ್ಕೆ ಪ್ರವೇಶಿಸುವಾಗ ಶಾಸಕರ ಅಂಗರಕ್ಷಕ, ಆಪ್ತ ಸಹಾಯಕ ಹಾಗೂ ವಾಹನ ಚಾಲಕ ಸೇರಿ ನಾಲ್ವರು ಮಾತ್ರ ಪ್ರವೇಶಿಸಲು ಅವಕಾಶ ಕಲ್ಪಿಸಲಾಗಿದೆ. ಶಾಸಕರ ಕಾರುಗಳಿಗೆ ಮಾತ್ರ ಪಾರ್ಕಿಂಗ್ ವ್ಯವಸ್ಥೆ ಶಾಸಕರ ಭವನದ ಎಲ್ಲ ಸಿಬ್ಬಂದಿಗೂ ಕಡ್ಡಾಯವಾಗಿ ಕೊರೊನಾ ತಪಾಸಣೆ ಮಾಡಿಸುವುದು, ಶಾಸಕರ ಹೊರತಾಗಿ ತಂಗಿರುವವರ ಮಾಹಿತಿ ಪಡೆದು ಅನಗತ್ಯವಾಗಿ ತಂಗಿದವರನ್ನು ತೆರವುಗೊಳಿಸಲು ಕ್ರಮ ಕೈಗೊಳ್ಳಲು ಸಭೆಯಲ್ಲಿ ನಿರ್ಧಸಲಾಗಿದೆ. ವಿಧಾನ ಮಂಡಲಗಳ ಸಮಿತಿಗಳ ಸಭೆಗಳಿಗೆ ಸಾಮಾಜಿಕ ಅಂತರ ಕಾಯದುಕೊಂಡು ಅಗತ್ಯವಿದ್ದಷ್ಟು ಸಿಬ್ಬಂದಿಯನ್ನು ಮಾತ್ರ ಬಳಸಿಕೊಳ್ಳಲು ತೀರ್ಮಾನಿಸಲಾಗಿದೆ ಎಂದು ವಿಧಾನಸಭೆ ಕಾರ್ಯದರ್ಶಿ ಎಂ.ಕೆ. ವಿಶಾಲಾಕ್ಷಿ ತಿಳಿಸಿದ್ದಾರೆ. ಸಭೆಯಲ್ಲಿ ರಾಜ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಬಿಬಿಎಂಪಿ ಆಯುಕ್ತ, ಡಿಪಿಎಆರ್ ಕಾರ್ಯದರ್ಶಿ ಹಾಗೂ ನಗರ ಪೊಲೀಸ್ ಆಯುಕ್ತರು ಪಾಲ್ಗೊಂಡಿದ್ದರು.